

ಅರುಣ ಪಿ. ಭಟ್ಟ

## ದಿನಾಂಕ 26.9.2019ರಿಂದ 2.10.2019ರವರೆಗೆ




ಭೂ ವ್ಯವಹಾರಗಳಲ್ಲಿ ಒಳ್ಳೆಯ ಲಾಭ. ದೂರದ ಪ್ರದೇಶಗಳಿಗೆ ಪ್ರಯಾಣ ಮಾಡುವ ಸಾಧ್ಯತೆಗಳಿದೆ. ಕಾಗದ ಪತ್ರಗಳಿಗೆ ಸಹಿ ಹಾಕುವ ಮುನ್ನ ಪರಿಶೀಲನೆ ನಡೆಸಿ. ಕೆಲವರಿಗೆ ಉದ್ಯೋಗದಲ್ಲಿ ಬಡ್ತಿ ದೊರೆಯುವ ಸಾಧ್ಯತೆ.

**ಶುಭದಿನ: 28. ಹನುಮಾನ್ ಚಾಲೀಸ್ ಓದಿರಿ.**




ನೀವು ನಂಬಿದ ವಿಚಾರಗಳನ್ನು ಪ್ರಸ್ತುತ ಪಡಿಸಲು ಶ್ರಮ. ಕಾನೂನು ವಿಚಾರಗಳು ನಿಮ್ಮ ವಿರುದ್ಧ ಸಾಗುತ್ತವೆ. ಬೇರೊಬ್ಬರು ನೀಡಿದ ವಸ್ತು, ಹಣ, ಕಾಗದ ದಾಖಲೆ ಪತ್ರಗಳನ್ನು ನೀವು ಕಳೆದುಕೊಳ್ಳುವ ಸಾಧ್ಯತೆ ಇದೆ.

**ಶುಭದಿನ: 27. ಗಣೇಶ ಪಂಚರತ್ನ ಸ್ತೋತ್ರ ಪಠಣ ಮಾಡಿರಿ.**




ನೌಕರರಿಗೆ ವರ್ಗಾವಣೆ ಸಾಧ್ಯತೆ. ವೈಯಕ್ತಿಕ ಸಂಬಂಧದಲ್ಲಿ ಹುಷಾರಾಗಿರಬೇಕು. ಕೋರ್ಟ್ ಪ್ರಕರಣಗಳತ್ತ ಗಮನ ನೀಡಬೇಕು. ಸಂಗಾತಿ ಮಕ್ಕಳಿಗೆ ಬೆಲೆ ಬಾಳುವ ಉಡುಗೊರೆ ನೀಡುವ ಬಗ್ಗೆ ಆಲೋಚನೆ ಮಾಡುತ್ತೀರಿ.

**ಶುಭದಿನ: 1. ಕಾಲಭೈರವಾಷ್ಟಕ ಸ್ತೋತ್ರ ಪಠಿಸಿರಿ.**




ಆದಾಯದಲ್ಲಿ ಹೆಚ್ಚಳ. ಶ್ರಮಕ್ಕೆ ಪ್ರತಿಫಲ. ಸಾಮಾಜಿಕವಾಗಿ ವರ್ಚಸ್ಸು, ಕೀರ್ತಿ. ವಿದ್ಯಾರ್ಥಿಗಳಿಗೆ ಯಶಸ್ಸು. ಹಣಕಾಸಿನ ವ್ಯವಹಾರದಲ್ಲಿ ಅನಿರೀಕ್ಷಿತವಾದ ಬಿಕ್ಕಟ್ಟು. ಭಾವನಾತ್ಮಕ ಸನ್ನಿವೇಶಗಳಲ್ಲಿ ಅಪಾಯಕ್ಕೆ ತುತ್ತಾಗಬಹುದು.

**ಶುಭದಿನ: 29.ವಿಷ್ಣುಸಹಸ್ರನಾಮ ಓದಿರಿ.**




ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಫಲವನ್ನು ಪಡೆಯಲು ಸಕಾಲ. ಹೊಸ ವಸ್ತು ಖರೀದಿ ಮುಂದಕ್ಕೆ ಹಾಕಿ. ಪೋಷಕರಿಗೆ ಮಕ್ಕಳಿಂದ ಸಂತೋಷ. ಆರೋಗ್ಯದಲ್ಲಿ ಸಮಸ್ಯೆಗಳು ಕಾಣಿಸಿಕೊಳ್ಳಬಹುದು. ಆಹಾರ ನೀರು ಸೇವಿಸುವಾಗ ಸ್ವಚ್ಛತೆ ಬಗ್ಗೆ ಹೆಚ್ಚು ಗಮನ ನೀಡಿ.

**ಶುಭದಿನ 30. ಶ್ರೀಗೋವಿಂದಾಷ್ಟಕಮ್ ಪಠಿಸಿರಿ.**




ಕೆಮ್ಮು, ನೆಗಡಿ ಕಾಡಬಹುದು. ವಾರದ ಮೊದಲಾರ್ಧದ ನಂತರ ಆರ್ಥಿಕವಾಗಿ ಬಲ ಬರುತ್ತದೆ. ಉಳಿತಾಯ ಮಾಡುವ ಕಡೆಗೆ ಮನಸ್ಸು ಹರಿಯುತ್ತದೆ. ಮಕ್ಕಳ ಪ್ರಗತಿಯಿಂದ ಹೆಮ್ಮೆ. ಬಾಕಿ ಹಣ ಬರಬೇಕಾಗಿದ್ದಲ್ಲಿ ಬರುವ ಅವಕಾಶ ಹೆಚ್ಚಿರುತ್ತದೆ.

**ಶುಭದಿನ: 28. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.**




ಉದ್ಯೋಗ ನಿಮಿತ್ತ ದೂರ ಪ್ರಯಾಣ. ಹಣ ಹೂಡಿಕೆಯಲ್ಲಿ ಲಾಭ. ಉದ್ಯೋಗದಲ್ಲಿ ಒತ್ತಡ. ಆರೋಗ್ಯದಲ್ಲೂ ಏರು ಪೇರಾಗುತ್ತದೆ. ಒಡಹುಟ್ಟಿದವರ ಜತೆಗೆ ಉತ್ತಮ ಬಾಂಧವ್ಯ ಇರುತ್ತದೆ. ದಂಪತಿಗೆ ಶುಭ ಸುದ್ದಿ ಕೇಳುವ ಯೋಗವಿದೆ.

**ಶುಭದಿನ: 29. ದೇವಿ ಆರಾಧನೆ, ಸೌಂದರ್ಯಲಹರಿ ಪಠಿಸಿರಿ.**




ಹೊಸ ಮನೆ ಕಟ್ಟುವವರಿಗೆ ಸಮಯ. ನೌಕರಸ್ಥರಿಗೆ ಮೇಲಧಿಕಾರಿಗಳ ಜತೆಗೆ ಉತ್ತಮ ಸಂಬಂಧ. ಪ್ರೀತಿ ಪ್ರೇಮದಲ್ಲಿ ಇರುವವರು ಸಂಗಾತಿ ಜತೆಗೆ ಪ್ರಮುಖ ವಿಚಾರಗಳ ಚರ್ಚೆ. ವಾರದ ಅಂತ್ಯಕ್ಕೆ ಸಕಾರಾತ್ಮಕ ಬೆಳವಣಿಗೆಗಳನ್ನು ಕಾಣುತ್ತೀರಿ.

**ಶುಭದಿನ 2. ಶಿವಪೂಜೆ, ಶಿವಪಂಚಾಕ್ಷರಸ್ತೋತ್ರ ಪಠಿಸಿರಿ.**




ಮೇಲಧಿಕಾರಿಗಳಿಂದ ಪ್ರಶಂಸೆ. ವ್ಯಾಪಾರಿಗಳಿಗೆ ಸಮಸ್ಯೆ. ತಲೆ ನೋವು ಕಾಣಿಸಿಕೊಳ್ಳುತ್ತದೆ. ವಿವಾಹಿತರಿಗೆ ವೈವಾಹಿಕ ಜೀವನ ಚೆನ್ನಾಗಿರುತ್ತದೆ. ಸಂಗಾತಿ ಜತೆಗೆ ಸುಮಧುರವಾದ ಕ್ಷಣಗಳನ್ನು ಅನುಭವಿಸಲಿದ್ದೀರಿ. ಭೂಮಿ ಖರೀದಿಗೆ ಒಳ್ಳೆಯ ಸಮಯ.

**ಶುಭದಿನ: 27. ದೇವ್ಯಪರಾಧಕ್ಷಮಾಪಣ ಸ್ತೋತ್ರ ಪಠಿಸಿರಿ.**




ಸಾಮಾಜಿಕವಾಗಿ ಉತ್ತಮ ಹೆಸರು. ನಿಮ್ಮ ಜನಪ್ರಿಯತೆ ಕೂಡ ಹೆಚ್ಚಾಗಲಿದೆ. ವಿದ್ಯಾರ್ಥಿಗಳು ಹೆಚ್ಚು ಶ್ರಮ ವಹಿಸಿ. ವ್ಯಾಜ್ಯಕ್ಕೆ ಹೆಚ್ಚಿನ ಹಣ ಖರ್ಚು ಮಾಡಬೇಕಾಗುತ್ತದೆ. ಆರೋಗ್ಯವು ಉತ್ತಮವಾಗಿರುತ್ತದೆ. ಕುಟುಂಬದಿಂದ ದೂರ.

**ಶುಭದಿನ: 30. ಸಂಕಷ್ಟಹರ ಮಹಾಗಣಪತಿ ಪೂಜೆ ಮಾಡಿರಿ.**




ಕೌಟುಂಬಿಕ ವಿಚಾರಗಳಲ್ಲಿ ಉತ್ತಮ ಪ್ರಗತಿ ಆರೋಗ್ಯ ಉತ್ತಮವಾಗಿ ಇರುತ್ತದೆ. ಬಂಡವಾಳ ಹೂಡಿಕೆಗೆ ಹಲವು ಅವಕಾಶಗಳನ್ನು ಪರಿಶೀಲಿಸಿ. ಮಕ್ಕಳ ಮಂಗಳಕಾರ್ಯದಲ್ಲಿ ಯಶಸ್ಸು ಕಾಣುವ ಸಾಧ್ಯತೆ ಹೆಚ್ಚಾಗಿದೆ.

**ಶುಭದಿನ: 2. ಶ್ರೀ ಲಕ್ಷ್ಮೀ ನರಸಿಂಹಪಂಚರತ್ನ ಸ್ತೋತ್ರ ಪಠಿಸಿರಿ.**




ವಾರ ಪೂರ್ತಿ ಕೆಲಸ. ಅನಾರೋಗ್ಯ ಉಂಟಾಗುವ ಸಂಭವವಿದೆ. ಮನೆಯಲ್ಲಿ ಶುಭ ಕಾರ್ಯ ಯೋಜನೆ. ಮೇಲಧಿಕಾರಿಗಳಿಂದ ಮೆಚ್ಚುಗೆ ದೊರೆಯುತ್ತದೆ. ವ್ಯಾಪಾರದಲ್ಲಿ ಆದಾಯ ಹೆಚ್ಚಳ ಮನಸಿಗೆ ಸಂತೋಷ ಸಮಾಧಾನ ಮೂಡಲಿದೆ.

**ಶುಭದಿನ: 28 ಕಾಲಭೈರವನ ಸೇವೆ. ಲಿಂಗಾಷ್ಟಕ ಪಠಿಸಿರಿ.**


DHEEPAM
LAMP OIL
BLEND OF 5 OILS
ದೀಪದ ಬೆಳಕಲ್ಲಿ ಒಂದು ದೈವೀಕ ಅನುಭವ
ಸುಗಂಧ ಸುವಾಸನೆ ಹರಡುವ ಪಂಚ ದೀಪ ಎಣ್ಣೆ